ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಕುರಿತು

ಶ್ರೀ ಶಶೀಲ್ ಜಿ. ನಮೋಶಿ(ಶಿಕ್ಷಕರ ಕ್ಷೇತ್ರ) –

354 (502) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಪೂರ್ಣ ಪ್ರಮಾಣದ ಆಡಳಿತ ಮಂಡಳಿ ರಚಿಸಲಾಗಿದೆಯೇ; ರಚಿಸದಿದ್ದಲ್ಲಿ ಯಾವಾಗ ರಚಿಸಲಾಗುವುದು;

(ಆ) ಪೂರ್ಣ ಪ್ರಮಾಣದ ಆಡಳಿತ ಮಂಡಳಿ ರಚಿಸದಿರುವುದರಿಂದ ಮಂಡಳಿಯ ಆಡಳಿತಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)